**ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂಃ ನ್ಯಾಯಾಲಯಃ ನರಸಿಂಹರಾಜಪುರ**

**ಸಿಸಿಃನಂಃ 641/2024**

**ಸಿ.ಡಬ್ಲ್ಯೂಃ 4**
**ಪಿ.ಡಬ್ಲೂಃ 3**

**ಸಾಕ್ಷಿದಾರರ ಹೆಸರು ಃ ವಾಸುದೇವ್ ಕೋಟಿಯನ್**

**ತಂದೆಯ ಹೆಸರು ಃ ಲೇಟ್ ಕೊರಗಪೂಜಾರಿ**
**ವಯಸ್ಸು ಃ 62 ವರ್ಷ**
**ಉದ್ಯೋಗ ಃ ಕೃಷಿ**
**ವಾಸಸ್ಥಳ ಃ ಬಿ ಹೆಚ್ ಕೈಮರ, ನ ರಾ ಪುರ ತಾಲ್ಲೂಕು.**

**ದಿನಾಂಕಃ 06.01.2026 ರಂದು ಪ್ರಮಾಣವಚನ ಬೋಧಿಸಲಾಯಿತು.**

**ಃಃ ಮುಖ್ಯ ವಿಚಾರಣೆಃ ಮಾನ್ಯಃ ಎಪಿಪಿಯವರಿಂದಃ**

ಈ ಪ್ರಕರಣದಲ್ಲಿ ಪಂಚ ಸಾಕ್ಷಿದಾರರಾಗಿ ಸಹಕರಿಸುವಂತೆ ಪೊಲೀಸರು ನನಗೆ ತಿಳಿಸಿದ್ದರು. ನನಗೆ ದಿನಾಂಕ ನೆನಪಿರುವುದಿಲ್ಲ. ಈ ಪ್ರಕರಣ ಬಿ ಹೆಚ್ ಕೈಮರ ಅರಳೀಕೊಪ್ಪ ಗ್ರಾಮದಲ್ಲಿರುವ ಗಣಪತಿ ದೇವಸ್ಥಾನದಲ್ಲಿ ಕಳ್ಳತನವಾದ ಬಗ್ಗೆ ಪಂಚ ಸಾಕ್ಷಿದಾರನಾಗಿ ಸಹಕರಿಸುವಂತೆ ಪೊಲೀಸರು ತಿಳಿಸಿರುತ್ತಾರೆ. ಆ ಸಂದರ್ಭದಲ್ಲಿ ಚಾಸಾ-1 ಸ್ಥಳದಲ್ಲಿ ಹಾಜರಿದ್ದರು. ನನ್ನ ಜೊತೆ ಚಾಸಾ-5 ಪಂಚ ಸಾಕ್ಷಿದಾರರಾಗಿ ಹಾಜರಿದ್ದರು.

ಈಗ ಸಾಕ್ಷಿಗೆ ನಿಪಿ-9 ನ್ನು ತೋರಿಸಲಾಗಿ ಸಾಕ್ಷಿಯು ಪಂಚನಾಮೆಯನ್ನು ನೋಡಿ ಗುರುತಿಸಿದ್ದು ಅದನ್ನು ನಮ್ಮ ಸಮಕ್ಷಮ ಸ್ಥಳದಲ್ಲಿಯೇ ಪೊಲೀಸರು ರಾತ್ರಿ 7.30 ರಿಂದ 8.30 ರವರೆಗೆ ಬರೆದಿರುತ್ತಾರೆ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-9(ಸಿ) ಎಂದು ಗುರುತಿಸಲಾಯಿತು. ಆ ಸಂದರ್ಭದಲ್ಲಿ ಪೊಲೀಸರು ಒಂದು ಭಾವಚಿತ್ರವನ್ನು ತೆಗೆದುಕೊಂಡಿರುತ್ತಾರೆ. ಈಗ ಸಾಕ್ಷಿಯು ಸದರಿ ಭಾವಚಿತ್ರವನ್ನು ನೋಡಿ ಗುರುತಿಸಿದ್ದು ಅದು ಈಗಾಗಲೇ ನಿಪಿ-11 ಎಂದು ಗುರುತಿಸಲಾಗಿರುತ್ತದೆ.

(ಈ ಹಂತದಲ್ಲಿ ಮಾನ್ಯ ಎಪಿಪಿ ಯವರು ಈ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ಕೋರುತ್ತಾರೆ ಅಂತೆಯೇ ಪರಿಗಣಿಸಿ ಅನುಮತಿ ನೀಡಲಾಯಿತು)

**ಃಃಪಾಟೀ ಸವಾಲುಃ ಮಾನ್ಯ ಎಪಿಪಿಯವರಿಂದಃಃ**

ದಿನಾಂಕಃ 06.08.2024 ರಂದು ಪೊಲೀಸರು ನ ರಾ ಪುರ ತಾಲ್ಲೂಕು, ಬಿ ಹೆಚ್ ಕೈಮರ ಅರಳೀಕೊಪ್ಪದ ಗಣಪತಿ ಸುಬ್ರಹ್ಮಣ್ಯ ದೇವಸ್ಥಾನದಲ್ಲಿ ಕಳ್ಳತನವಾದ ಬಗ್ಗೆ ಸ್ಥಳ ಮಹಜರನ್ನು ಸಂಜೆ 6.30 ರಿಂದ 7.00 ಗಂಟೆಯವರೆಗೆ ದಾಖಲು ಮಾಡಿರುತ್ತಾರೆ ಎಂದರೆ ಸಾಕ್ಷಿಯು ಸಂಜೆ 7.30 ರಿಂದ 8.30 ಗಂಟೆಯವರೆಗೆ ದಾಖಲು ಮಾಡಿಕೊಂಡಿರುತ್ತಾರೆಂದು ನುಡಿಯುತ್ತಾರೆ.

**ಃಪಾಟೀ ಸವಾಲು ಆರೋಪಿತರ ಪರ ಶ್ರೀ. ಎಂ ಸಿ ವಕೀಲರಿಂದಃಃ**

ನನಗೆ ಈ ಪ್ರಕರಣದಲ್ಲಿ ಮಹಜರ್ ಸಾಕ್ಷಿದಾರನಾಗಿ ಸಹಕರಿಸಬೇಕೆಂದು ಪೊಲೀಸರು ಯಾವುದೇ ನೋಟೀಸು ನೀಡಿರುವುದಿಲ್ಲ. ಸದರಿ ಮಹಜರ್ ಗೆ ಪೊಲೀಸರು ನಾವು ದೇವಸ್ಥಾನದ ಪಕ್ಕದಲ್ಲಿರುವ ಸಭಾಂಗಣದಲ್ಲಿ ಸಭೆ ನಡೆಸುವ ಸಂದರ್ಭದಲ್ಲಿ ಬಂದು ದಾಖಲೆಗೆ ಸಹಿ ಮಾಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನಿಪಿ-9 ಮಹಜರಿನಲ್ಲಿ ಏನು ಬರೆದಿದೆ ಎಂದು ನನಗೆ ತಿಳಿದಿರುವುದಿಲ್ಲ. ಪೊಲೀಸರು ಸ್ಥಳದಲ್ಲಿ ಯಾವುದೇ ಭಾವಚಿತ್ರವನ್ನು ತೆಗೆಯಲಿಲ್ಲ ಎಂದರೆ ಸರಿಯಲ್ಲ. ನಾನು ನ್ಯಾಯಾಲಯದಲ್ಲಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಃಃ ಮರು ವಿಚಾರಣೆ ಇಲ್ಲಃಃ**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು.)**

**ಓ ಹೇ ಕೇ ಸ ಇ ಎ ಒ**

**Sd/-xxx**

**ಪ್ರ.ದ.ನ್ಯಾದಂಃ ನ.ರಾ.ಪುರ.**

**ಸಾಕ್ಷಿ ಸಹಿಃ**